682

ಮೈಸೂರ ಗೆಜೆಟ್

ಸರ್ಕಾರದಿಂದ ಪ್ರಕಟಿಸಲ್ಪಟ್ಟದ್ದು.

ಬೆಂಗಳೂರು, ಶನಿವಾರ, ಜುಲೈ ತಾ॥ 27, ಸನ್ 1889.

ಸೂಚನೆ. ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯೂಗವರ್ನಮೆಂಟ್, ರೆಸಿಡೆಂಟರು, ಜೀಫ್ ಜಡ್ಜ್‌ರು, ವಗೈರೇರಿಂದ ಕೊಡೋಣಾದ ಇಸ್ತಿಹಾರ್ ನಾಮೆಗಳು.

ಫೈನಾಷಿಯೆಲ್ ಇಲಾಖಾ.

1882ನೇ ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ ಷರಾ ಬರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್‌ನಲ್ಲಿ, ಸ್ಟ್ರಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ನಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದರಿಂದ ಲಂಡನ್‌ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಷೇಸಿಮೆಂಟ್ ಯಾನೇ ಷರಾ ಬಗ್ಗೆ ಇದರಡಿ ರುಜಾ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ರೂಫ್ಟಿಕೇಟೂದ ಡಿಮಾಂಡ್ ಡ್ರಾಫ್‌ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಷೇಸ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜಿ ಮಾಡಲ್ಪಡಲಾರದು.

ಹೆಚ್. ಪಡೆರ್ನ,
ಕಾಂಪ್ಟ್ರೋಲರ್.

ಬೆಂಗಳೂರು ಡಿಸ್ಟ್ರಿಕ್ಟ್.

ಬೆಂಗಳೂರು ಸಬ್ ಜಡ್ಜ್‌ಯವರ ಕೋರ್ಟಿನಲ್ಲಿ.

1889ನೇ ಇಸವಿ ಆರ್ಜೀ ನಂಬರ್ 524.

ಬೆಂಗಳೂರು ಗಂಗಮ್ಮನಗುಡೀ ಪಾಳ್ಯದಲ್ಲಿ ಯಿದ್ದ ಮೃತಪಟ್ಟ ಈರಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಮಸ್ತಾನಮ್ಮ, ಮೃತಪಟ್ಟ ಸದರೀ ಈರಪ್ಪನಿಗೆ ಮಗಳು ಆಗಬೇಕೆಂಬ ಹಕ್ಕ್ತದಾರೀ ಮೇಲೆ ಗಂಗಮ್ಮನಗುಡಿ ಪಾಳ್ಯದ ಸ್ಥಳದ ಮಸ್ತಾನಮ್ಮನು ಸದರೀ ಗಂಗಮ್ಮನಗುಡಿ ಪಾಳ್ಯದ ವಾಸಸ್ಥರಾಗಿ ಮೃತಪಟ್ಟ ಈರಪ್ಪನವರ ಜಿಂದಗಿ ಬ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರೆಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರಳಾದ ಮಸ್ತಾನಮ್ಮನ ಅರ್ಜೀಯನ್ನು 1889ನೇ ಇಸವಿ ಆಗಸ್ಟು ತಿಂಗಳು ತಾರೀಖು 23ರಲ್ಲಿ ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಈರಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1889ನೇ ಇಸವಿ ಜುಲೈ ತಿಂಗಳು 15ನೇ ತಾರೀಖಿನಲ್ಲಿ ಕೋರ್ಟು ಮೊಹರ್‌ನಿಸಿ ನಮ್ಮ ದಸ್ತಖತ್ತೂಡನೆ ಕೊಡೋಣಾಗಿದೆ.

ಯಲ್. ಅನಂತಸ್ವಾಮಿರಾವ್,
ಸಬ್ ಜಡ್ಜ್.